ಕರ್ನಾಟಕ ಸರ್ಕಾರ

ಅರಣ್ಯ ಇಲಾಖೆ

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮಂಗಳೂರು ವೃತ್ತ, ಮಂಗಳೂರು

# ಅಧಿಸೂಚನೆ

ದಿನಾಂಕ: 14.01.2019

ಸಂಖ್ಯೆ: ಎ4/ಸಿಬ್ಬಂದಿ/ಅ.ವೀ.ನೇ/ಸಿಆರ್.106/2017–18

## 2 ಅರಣ್ಯ ವೀಕ್ಷಕ – ಪರಿಶಿಷ್ಟ ಪಂಗಡ (Forest Dwelling Tribes) ಬ್ಯಾಕ್‌ಲಾಗ್ ಹುದ್ದೆಗಳಿಗೆ ನೇರ ನೇಮಕಾತಿ 2018–19

* * * * * *

ಸರ್ಕಾರದ ಅಧಿಸೂಚನೆ ಸಂಖ್ಯೆ: ಎಫ್‌ಇಇ 61 ಎಫ್‌ಎನ್‌ಜಿ 2013 ದಿನಾಂಕ: 05.12.2014 ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2014 ರಂತೆ ಅರಣ್ಯ ಇಲಾಖೆಯ ಮಂಗಳೂರು ವೃತ್ತದ ಕುದುರೆಮುಖ ವನ್ಯಜೀವಿ ವಿಭಾಗ, ಕಾರ್ಕಳ ವಿಭಾಗದ 2 ಪರಿಶಿಷ್ಟ ಪಂಗಡ (Forest Dwelling Tribes) ಬ್ಯಾಕ್‌ಲಾಗ್ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ನೇಮಕಾತಿ ಪ್ರಕ್ರಿಯೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಮಂಗಳೂರು ವೃತ್ತ, ಮಂಗಳೂರು ಇವರು ಆಯ್ಕೆ ಪ್ರಾಧಿಕಾರವಾಗಿರುತ್ತಾರೆ.

1. ಅರ್ಜಿ ಸಲ್ಲಿಸುವ ವಿಧಾನ:

ಅರ್ಜಿಯನ್ನು On-line ಮುಖಾಂತರ ಅಭ್ಯರ್ಥಿಗಳು ಸಲ್ಲಿಸತಕ್ಕದ್ದು. On-line ಅರ್ಜಿ, ಅಧಿಸೂಚನೆ ಇವುಗಳನ್ನು ಇಲಾಖಾ ವೆಬ್‌ಸೈಟ್: www.aranya.gov.in ನಲ್ಲಿ ಪ್ರಕಟಪಡಿಸಲಾಗುವುದು. ಇದನ್ನು ಹೊರತುಪಡಿಸಿ ಯಾವುದೇ ವಿಧದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ. On-line ಅರ್ಜಿಯನ್ನು ತುಂಬಲು ಸಹಾಯಕವಾಗುವ ಸೂಚನೆಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಆನ್‌ಲೈನ್ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತೆಗೆದು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು. On-line ಅರ್ಜಿಯ ಪ್ರತಿಯನ್ನು ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಇಲಾಖೆಗೆ ಸಲ್ಲಿಸಬೇಕಾದ ಅವಶ್ಯಕತೆ ಇರುವುದಿಲ್ಲ.

1.1. ಜನ್ಮ ದಿನಾಂಕ ದೃಢೀಕರಿಸುವ ಪ್ರಮಾಣ ಪತ್ರ, ಶೈಕ್ಷಣಿಕ ಪ್ರಮಾಣ ಪತ್ರಗಳು, ಜಾತಿ/ಪ್ರವರ್ಗ ದೃಢೀಕರಿಸುವ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಇಲಾಖಾ ವೆಬ್‌ಸೈಟ್‌ಗೆ ಅರ್ಜಿ ಸಲ್ಲಿಸುವ ವೇಳೆಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು, ಈ ಕುರಿತು ಪೂರ್ಣ ಮಾಹಿತಿಯನ್ನು ಅರ್ಜಿ ಸಲ್ಲಿಸುವ ವೇಳೆಯಲ್ಲಿ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಅಭ್ಯರ್ಥಿಯು ಯಾವ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ವೇಳೆ ಅಪ್‌ಲೋಡ್ ಮಾಡಿರುತ್ತಾರೆಯೋ ಅದೇ ಪ್ರಮಾಣ ಪತ್ರವನ್ನು ಎಲ್ಲಾ ಹಂತದಲ್ಲೂ ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಇದನ್ನು ಯಾವ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

1.2. On-line ಮುಖಾಂತರ ಅರ್ಜಿಯನ್ನು ದಿನಾಂಕ: **01.02.2019** ರಿಂದ **16.02.2019** ರಂದು ಸಂಜೆ **5.00** ಗಂಟೆಯವರೆಗೆ ಸಲ್ಲಿಸಬಹುದಾಗಿರುತ್ತದೆ.

1.3. ಅರ್ಜಿ ಶುಲ್ಕ:

ಪರಿಶಿಷ್ಟ ಪಂಗಡ ಪ್ರವರ್ಗಕ್ಕೆ ಸೇರಿದ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ. 50.00 + ಸೇವಾ ಶುಲ್ಕ ರೂ. 20.00. On-line ನಲ್ಲಿ ಅರ್ಜಿ ಸಲ್ಲಿಸಿದ ನಂತರ, ಮುದ್ರಿತ ಅರ್ಜಿ ಪ್ರತಿಯನ್ನು ತೆಗೆದುಕೊಂಡು, ಇ-ಪಾವತಿ ಸೌಲಭ್ಯವಿರುವ ಅಂಚೆ ಕಚೇರಿಯಲ್ಲಿ ಮುದ್ರಿತ ಅರ್ಜಿ ಪ್ರತಿಯನ್ನು ತೋರಿಸಿ, ಈ ಮೇಲೆ ಹೇಳಿರುವ ಅರ್ಜಿ ಶುಲ್ಕ ಮತ್ತು ಸೇವಾ ಶುಲ್ಕವನ್ನು ಅಭ್ಯರ್ಥಿಗಳು ಪಾವತಿಸತಕ್ಕದ್ದು. **ಅರ್ಜಿ ಶುಲ್ಕ ಪಾವತಿಸಲು ದಿನಾಂಕ: 01.02.2019 ರಿಂದ 18.02.2019 ರ ಮಧ್ಯಾಹ್ನ 2.30 ರ ವರೆಗೆ ಆಗಿರುತ್ತದೆ.**

ಸೂಚನೆ: On-line ನಲ್ಲಿ ಅರ್ಜಿಯನ್ನು ಸಲ್ಲಿಸದೇ ನೇರವಾಗಿ ಕೊರಿಯರ್, ನೊಂದಾಯಿತ ಅಂಚೆ, ಸಾಧಾರಣ ಅಂಚೆ, ಮುದ್ದಾಂ ಇತ್ಯಾದಿ ವಿಧಾನಗಳ ಮುಖಾಂತರ ಕಳುಹಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅರಣ್ಯ ವೀಕ್ಷಕ ಹುದ್ದೆ: 2 ಪರಿಶಿಷ್ಟ ಪಂಗಡ (Forest Dwelling Tribes) ಬ್ಯಾಕ್‌ಲಾಗ್ ಹುದ್ದೆಗಳು**
**ವೇತನ ಶ್ರೇಣಿ:** ರೂ. 18600–450–20400–500–22400–55024600–600–27000–650–29600–750–32600

**ಅರಣ್ಯ ವೀಕ್ಷಕರ ಖಾಲಿ ಹುದ್ದೆಗಳ ಮೀಸಲಾತಿ ವರ್ಗೀಕರಣ ಈ ಕೆಳಗಿನಂತಿದೆ:**

| ಕ್ರ.ಸಂ. | ಅರಣ್ಯ ವಿಭಾಗ | ಹುದ್ದೆಗಳ ಸಂಖ್ಯೆ |
|---|---|---|
| 1 | ಕುದುರೆಮುಖ ವನ್ಯಜೀವಿ ವಿಭಾಗ, ಕಾರ್ಕಳ | 2 |

1. **ಹುದ್ದೆಗಳ ಮೀಸಲಾತಿ ವರ್ಗೀಕರಣ:**
ಅರಣ್ಯ ವೀಕ್ಷಕರ ಖಾಲಿ ಹುದ್ದೆಗಳ ಮೀಸಲಾತಿ ವರ್ಗೀಕರಣ ಈ ಕೆಳಗಿನಂತಿದೆ:

1.1. **ಕುದುರೆಮುಖ ವನ್ಯಜೀವಿ ವಿಭಾಗ, ಕಾರ್ಕಳ – 2 ಪರಿಶಿಷ್ಟ ಪಂಗಡ (Forest Dwelling Tribes) ಬ್ಯಾಕ್‌ಲಾಗ್ ಹುದ್ದೆಗಳು**
ಕುದುರೆಮುಖ ವನ್ಯಜೀವಿ ವಿಭಾಗ, ಕಾರ್ಕಳ ವ್ಯಾಪ್ತಿಯಲ್ಲಿ ಬರುವ **ಪೂರ್ಣ ಅಥವಾ ಭಾಗಶಃ ತಾಲೂಕು** (ಬೆಳ್ತಂಗಡಿ, ಮೂಡಿಗೆರೆ, ಶೃಂಗೇರಿ, ಕೊಪ್ಪ, ಕಾರ್ಕಳ, ಕುಂದಾಪುರ, ಉಡುಪಿ, ಸಾಗರ, ಹೊಸನಗರ, ತೀರ್ಥಹಳ್ಳಿ) ಪ್ರದೇಶಗಳಲ್ಲಿ 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿರುವ ಹಾಗೂ ಈ ವಿಭಾಗ ವ್ಯಾಪ್ತಿಯ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಠ ಪಂಗಡಕ್ಕೆ ಸೇರಿದ ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಕಾಡು ಕುರುಬ, ಹಕ್ಕಿಪಿಕ್ಕಿ, ಸೋಲಿಗ, ಸೋಲಿಗರು, ಯರವ, ಗೌಡ್ಲು, ಇರುಳರ್, ಇರುಲಿಗಾ, ಕೊರಗಾ, ಮೆಲಕುಡಿ, ಮಲೈಕುಡಿ, ಮಲೇರು, ಮೇದಾ ಮತ್ತು ತೋಡ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳಿಗೆ **2 ಹುದ್ದೆಗಳನ್ನು ಈ ಮೇಲ್ಕಾಣಿಸಿದ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.**

2. **ಅರ್ಹತೆ ಮತ್ತು ನಿಬಂಧನೆಗಳು:**

2.1. **ವಿದ್ಯಾರ್ಹತೆ:** ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಈ ಕೆಳಕಂಡ ವಿದ್ಯಾರ್ಹತೆಯನ್ನು ಅಭ್ಯರ್ಥಿಯು ಹೊಂದಿರಬೇಕು.

| | |
|---|---|
| ಅರಣ್ಯ ವೀಕ್ಷಕ ಹುದ್ದೆ: | ಎಸ್.ಎಸ್.ಎಲ್.ಸಿ. ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. |

2.2. **ವಯೋಮಿತಿ:**
ಅಧಿಸೂಚನೆಯ ದಿನಾಂಕಕ್ಕೆ ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
ಅಧಿಸೂಚನೆಯ ದಿನಾಂಕಕ್ಕೆ ಗರಿಷ್ಠ ವಯೋಮಿತಿ ವಿವರಗಳು ಕೆಳಗಿನಂತಿದೆ:

| | | |
|---|---|---|
| **2.2.1** | ಪರಿಶಿಷ್ಠ ಪಂಗಡ | ಗರಿಷ್ಠ ವಯೋಮಿತಿ 33 ವರ್ಷಗಳು |

3. **ಸ್ವೀಕೃತ ಅರ್ಜಿಗಳ ಪರಾಮರ್ಶೆ/ನೇಮಕಾತಿ ವಿಧಾನ**
ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2014 ರ ಅನ್ವಯ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಮೀಸಲಾತಿ ವರ್ಗೀಕರಣ ಮಾಡಲಾಗಿದೆ. ಸ್ವೀಕರಿಸಲಾಗುವ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿ/ವಿವರಗಳ ಆಧಾರದ ಅನ್ವಯ ಅರ್ಹ ಅಭ್ಯರ್ಥಿಗಳಿಗೆ ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಸೂಚಿತ ದಿನಾಂಕದಂದು ಹಾಜರಾಗಲು ತಿಳಿಸಲಾಗುವುದು. ಸದರಿ ಸೂಚಿತ ದಿನಾಂಕದಂದು ಅರ್ಹ ಅಭ್ಯರ್ಥಿಗಳು ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ ಇವರ ಎದುರು ಹಾಜರುಪಡಿಸಬೇಕು.

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದವರು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆಯಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳಿಗೆ ಪೂರಕ ಮತ್ತು ಸರಿಯಾದ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಅಭ್ಯರ್ಥಿಗಳು ಹಾಜರುಪಡಿಸಿದ ಅಭ್ಯರ್ಥಿಗಳಿಗೆ ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹರಾಗುತ್ತಾರೆ. ಆಯಾ ದಿನಗಳಂದು ನಡೆಯುವ ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ

ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳ ಫಲಿತಾಂಶವನ್ನು ಆಯಾ ದಿನದಂದು ಆಯ್ಕೆ ಪ್ರಾಧಿಕಾರವು ಆಯಾ ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಪಡಿಸುವರು.

**ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆಯಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಿರುವ ಮಾಹಿತಿ/ಮೂಲ ದಾಖಲೆಗಳ ಪರಿಶೀಲನಾ ವೇಳೆ ಹಾಜರು ಪಡಿಸುವ ದಾಖಲೆಗಳಲ್ಲಿ ಯಾವುದೇ ರೀತಿಯ ಗೊಂದಲ/ ವ್ಯತಿರಿಕ್ತ ದಾಖಲೆ/ ಪ್ರಮಾಣ ಪತ್ರಗಳನ್ನು ಸಲ್ಲಿಸಿದ್ದಲ್ಲಿ ಅಂತಹ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡು ಅರ್ಜಿಯಲ್ಲಿನ ಮಾಹಿತಿಯನ್ನು ಬದಲಾವಣೆ ಮಾಡಲಾಗುವುದಿಲ್ಲ. ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಯು ಎಲ್ಲಾ ದಾಖಲೆಗಳನ್ನು ಪಡೆದಿಟ್ಟುಕೊಂಡು ಅರ್ಜಿಯನ್ನು ಸಲ್ಲಿಸತಕ್ಕದ್ದು, ಒಂದು ವೇಳೆ ಅರ್ಜಿಯಲ್ಲಿ ನಮೂದಿಸಿರುವ ದಾಖಲೆಗಳನ್ನು ಸಲ್ಲಿಸಲು ವಿಫಲರಾದಲ್ಲಿ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಅಭ್ಯರ್ಥಿಯು ಎಲ್ಲಾ ಸಂಧರ್ಭದಲ್ಲಿ ಒಂದೇ ತರಹದ ದಾಖಲೆಗಳನ್ನು ಸಲ್ಲಿಸತಕ್ಕದ್ದು, ಈ ಬಗ್ಗೆ ಅಭ್ಯರ್ಥಿ ಬಹಳ ಎಚ್ಚರಿಕೆ ವಹಿಸಲು ಸೂಚಿಸಿದೆ. ವಿಭಿನ್ನ ಮಾಹಿತಿಯನ್ನು ಸಲ್ಲಿಸಿದ್ದಲ್ಲಿ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.**

4. **ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ, ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ ಮತ್ತು ಲಿಖಿತ ಪರೀಕ್ಷೆಗಳು:**
   ಮೇಲ್ಕಂಡ ಪರೀಕ್ಷೆಗಳ ಕುರಿತು ದಿನಾಂಕವನ್ನು ಕಾಲಕಾಲಕ್ಕೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

5. **ದೈಹಿಕ ತಾಳ್ವಿಕೆ ಪರೀಕ್ಷೆ:**

| | | | |
|---|---|---|---|
| ಪುರುಷ ಅಭ್ಯರ್ಥಿಗಳಿಗೆ | : | 1600 ಮೀಟರ್ ಓಟ | 07 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು. |
| ಮಹಿಳಾ ಅಭ್ಯರ್ಥಿಗಳಿಗೆ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ | : | 1000 ಮೀಟರ್ ಓಟ | 06 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು. |

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಪರಿಣಿಸಲಾಗುವುದು.

6. **ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ:**

| ಕ್ರ ಸಂ. | ಐಟಂ | ಅರ್ಹತಾ ಸಮಯ ಮತ್ತು ಕ್ರಮಿಸಬೇಕಾದ ದೂರ | |
|---|---|---|---|
| | | ಪುರುಷ ಅಭ್ಯರ್ಥಿಗಳಿಗೆ | ಮಹಿಳಾ ಅಭ್ಯರ್ಥಿಗಳಿಗೆ |
| 1 | 100 ಮೀಟರ್ ಓಟ | 15 ಸೆಕೆಂಡುಗಳು | 18.5 ಸೆಕೆಂಡುಗಳು |
| 2 | ಎತ್ತರ ಜಿಗಿತ | 1.20 ಮೀಟರ್ | 0.90 ಮೀಟರ್ |
| 3 | ಉದ್ದ ಜಿಗಿತ | 3.80 ಮೀಟರ್ | 2.50 ಮೀಟರ್ |
| 4 | ಶಾಟ್‌ಪುಟ್<br>ಪುರುಷ: 16 ಎಲ್.ಬಿ.<br>ಮಹಿಳೆ: 8 ಎಲ್.ಬಿ. | 5.60 ಮೀಟರ್ | 3.76 ಮೀಟರ್ |
| 5(ಎ) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡುಗಳು | – |
| 5(ಬಿ) | 200 ಮೀಟರ್ ಓಟ | – | 40 ಸೆಕೆಂಡುಗಳು |

ಈ ಮೇಲಿನ 5 ವಿವಿಧ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ 3 ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದಬೇಕು.

ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ತೇರ್ಗಡೆಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹತೆ ಪಡೆಯುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ

ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಯಾವುದೇ ಹಂತದಲ್ಲಿ ದೈಹಿಕ ತಾಳ್ವಿಕೆ/ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದಲ್ಲಿ ಅಥವಾ ಪರೀಕ್ಷೆ ನಡೆಯುವ ಸಮಯದಲ್ಲಿ ಗಾಯಗೊಂಡಲ್ಲಿ ಅಥವಾ ಇನ್ನಿತರ ಯಾವುದೇ ಕಾರಣಕ್ಕಾಗಿ ಅನರ್ಹರಾದ ಅಭ್ಯರ್ಥಿಗಳಿಗೆ ಇನ್ನೊಂದು ಅವಕಾಶ ನೀಡಲಾಗುವುದಿಲ್ಲ.

7. **ಲಿಖಿತ ಪರೀಕ್ಷೆ:**
ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ನೂರು (100) ಅಂಕಗಳದ್ದಾಗಿದ್ದು, ಅರವತ್ತು (60) ನಿಮಿಷಗಳ ಅವಧಿಯಲ್ಲಿ ಉತ್ತರಿಸಬೇಕಾಗಿದೆ. ಪ್ರಶ್ನೆ ಪತ್ರಿಕೆಯು ಬಹು ಆಯ್ಕೆ (objective multiple choice) ಮಾದರಿಯದಾಗಿದ್ದು, ಇದು ಪ್ರಾಥಮಿಕ ಸಾಮಾನ್ಯ ಜ್ಞಾನ ಹಾಗೂ ಪ್ರಾಥಮಿಕ ಅಂಕಗಣಿತ ವಿಷಯವನ್ನು ಒಳಗೊಂಡಿರುತ್ತದೆ.

**ವಿಶೇಷ ಸೂಚನೆ:** ಅಭ್ಯರ್ಥಿಗಳು ನೇಮಕಾತಿ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

**ಲಿಖಿತ ಪರೀಕ್ಷೆ ಪೂರ್ಣಗೊಂಡ ನಂತರ ಮೆರಿಟ್ ಪಟ್ಟಿಯನ್ನು ಪ್ರಕಟಿಸಲಾಗುವುದು. ಆಯ್ಕೆ ಮಾಡಬೇಕಾದ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳಿಗೆ ಈ ಕೆಳಕಂಡ ದೇಹದಾರ್ಢ್ಯತೆ ಮತ್ತು ವೈದ್ಯಕೀಯ ಪರೀಕ್ಷೆಯನ್ನು ವೈದ್ಯಾಧಿಕಾರಿಗಳಿಂದ ನಡೆಸಲಾಗುವುದು. ಈ ವೈದ್ಯಕೀಯ ಪರೀಕ್ಷೆಯಲ್ಲಿ ತೇರ್ಗಡೆಹೊಂದಿದ ಅಭ್ಯರ್ಥಿಗಳಿಗೆ ಹಾಗೂ ಮೆರಿಟ್ ಆಧಾರದ ಮೇರೆಗೆ ಹುದ್ದೆಗಳ ಸಂಖ್ಯೆಗಳ ಅನುಗುಣವಾಗಿ ರೋಸ್ಟರ್ ಬಿಂಧುಗಳ ಅನುಸಾರ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನುಸಾರ ಆಯ್ಕೆ ಮಾಡಲಾಗುವುದು.**

8. **ದೇಹದಾರ್ಢ್ಯತೆ ಪರೀಕ್ಷೆ:**

**8.1. ಶಾರೀರಿಕ ಮಾನದಂಡಗಳು:** ಶಾರೀರಿಕ ಮಾನದಂಡಗಳನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

| ಪುರುಷ ಅಭ್ಯರ್ಥಿಗಳಿಗೆ: | |
|---|---|
| **ದೇಹದಾರ್ಢ್ಯತೆ** | **ನಿಗಧಿಪಡಿಸಿದ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದ ಅಭ್ಯರ್ಥಿಗಳಿಗೆ** |
| ಎತ್ತರ: | ಕನಿಷ್ಠ 152 ಸೆ.ಮೀ. |
| ಎದೆ ಸುತ್ತಳತೆ: | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ. |
| ಎದೆ ಕನಿಷ್ಠ ಹಿಗ್ಗುವಿಕೆ: | 5 ಸೆ.ಮೀ. |

| ಮಹಿಳಾ ಅಭ್ಯರ್ಥಿಗಳಿಗೆ: | |
|---|---|
| **ದೇಹದಾರ್ಢ್ಯತೆ** | **ನಿಗಧಿಪಡಿಸಿದ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದ ಅಭ್ಯರ್ಥಿಗಳಿಗೆ** |
| ಎತ್ತರ: | ಕನಿಷ್ಠ 145 ಸೆ.ಮೀ. |
| ಎದೆ ಸುತ್ತಳತೆ: | ಅನ್ವಯಿಸುವುದಿಲ್ಲ |
| ಕನಿಷ್ಠ ತೂಕ: | 38 ಕೆ.ಜಿ. |

**8.2. ಈ ಕೆಳಕಂಡ ದೈಹಿಕ ನ್ಯೂನತೆಗಳನ್ನು ಹೊಂದಿರುವವರು ಆಯ್ಕೆಗೆ ಅನರ್ಹರು:**

1. ತಾಗು ಮಂಡಿಗಳು (knock knees)
2. ಬಾಗಿದ ಕಾಲುಗಳು (Bow legs)
3. ಚಪ್ಪಟೆ ಪಾದ (Flat feet)
4. ನರ ಊತವಿರುವವರು (Varicose Veins)
5. ಮಾತನಾಡಲು ಮತ್ತು ಕೇಳುವ ಸಾಮರ್ಥ್ಯದಲ್ಲಿ ತೊಡಕು (impaediment in speech and hearing)
6. ಪುರುಷ ಅಭ್ಯರ್ಥಿಗಳಿಗೆ ಅಂಡವಾಯು (hydrocele in men)
7. ಬಣ್ಣ ಕುರುಡು/ಇರುಳು ಕುರುಡು (vision/colour blindness/night blindness)

8.3. ದೃಷ್ಟಿ ಸಾಮರ್ಥ್ಯ:

ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯ ಕುರಿತು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

| ದೂರ ದೃಷ್ಟಿ (Distant vision) | | | ಸಮೀಪ ದೃಷ್ಟಿ (Near vision) | | |
|---|---|---|---|---|---|
| ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) | ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) |
| 6/6 ಮೀಟರ್ | ಅಥವಾ | 6/9 ಮೀಟರ್ | 0/6 ಮೀಟರ್ | ಅಥವಾ | 0/8 ಮೀಟರ್ |

ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

8.4. ಶ್ರವಣಶಕ್ತಿ:

ಅಭ್ಯರ್ಥಿಗಳ ಶ್ರವಣ ಶಕ್ತಿಯನ್ನು ಪರೀಕ್ಷಿಸಲು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

1. ರಿನ್ನರ್ಸ್ ಟೆಸ್ಟ್
2. ವೆಬ್ಬರ್ಸ್ ಟೆಸ್ಟ್
3. ಟೆಸ್ಟ್ ಫಾರ್ ವರ್ಟಿಗೋ

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

9. <u>ವಿಶೇಷ ಸೂಚನೆಗಳು:</u>

(1) **ಅರಣ್ಯ ವೀಕ್ಷಕ ಹುದ್ದೆಯ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿರುವ ಎಲ್ಲಾ ವೃತ್ತಗಳಲ್ಲಿ ಒಂದೇ ದಿನಾಂಕ ಮತ್ತು ಒಂದೇ ಸಮಯದಲ್ಲಿ ನೇಮಕಾತಿಗೆ ಸಂಬಂಧಿಸಿದ ಎಲ್ಲಾ ಪರೀಕ್ಷೆಗಳನ್ನು ನಡೆಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಯಾವುದಾದರೂ ಒಂದೇ ವೃತ್ತಕ್ಕೆ ಸಂಬಂಧಿಸಿದ ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ ಸಲ್ಲಿಸುವುದು ಒಳಿತು.**

(2) ಅಭ್ಯರ್ಥಿಗಳು ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ಧತೆ ಹಾಗೂ ತಂಗುವಿಕೆ ಬಗ್ಗೆ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

9.1. 10ನೇ ತರಗತಿ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ದಿನಾಂಕ 23-9-1985 ರಲ್ಲಿ ಸೂಚಿಸಿದ ಪ್ರಕಾರ ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

9.2. ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಹಾಗೂ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ, ಮೀಸಲಾತಿ ನಿಯಮಗಳ ಪ್ರಕಾರ ಪರಿಗಣಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

**9.3. ನೇಮಕಾತಿ ಹೊಂದಿದ ಅಭ್ಯರ್ಥಿಗಳ ತರಬೇತಿ, ಪರೀಕ್ಷಾರ್ಥ ಅವಧಿ ಹಾಗೂ ಸ್ಥಳ ನಿಯುಕ್ತಿ:**

ಅಂತಿಮವಾಗಿ ನೇಮಕಾತಿಗೆ ಅರ್ಹರಾದ ಅಭ್ಯರ್ಥಿಗಳನ್ನು ಅಧಿಸೂಚಿಸಿರುವ ವಿಭಾಗಕ್ಕೆ ನಿಯುಕ್ತಿಗೊಳಿಸಲಾಗುವುದು. ನೇಮಕಾತಿ ಹೊಂದಿದ ಅಭ್ಯರ್ಥಿಯು ಪ್ರಪ್ರಥಮವಾಗಿ ನೇಮಕ ಮಾಡಿದ ಸ್ಥಳದಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಪೂರೈಸತಕ್ಕದ್ದು.

ನೇಮಕಾತಿ ಹೊಂದಿದ ಅಭ್ಯರ್ಥಿಗಳು ಆಯಾ ಹುದ್ದೆಗೆ ನಿಗದಿಪಡಿಸಿದ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಬೇಕಾಗಿದೆ. ನಿಗದಿಪಡಿಸಿದ ತರಬೇತಿ ಅವಧಿ ಹಾಗೂ ಪರೀಕ್ಷಾರ್ಥ ಅವಧಿಯ ವಿವರ ಕೆಳಕಂಡಂತಿದೆ.

| ಹುದ್ದೆ | ತರಬೇತಿ ಅವಧಿ | ಪರೀಕ್ಷಾರ್ಥ ಅವಧಿ (ತರಬೇತಿ ಅವಧಿ ಸೇರಿ) |
|---|---|---|
| ಅರಣ್ಯ ವೀಕ್ಷಕ | 6 ತಿಂಗಳು | 24 ತಿಂಗಳು |

**10. ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳ ವಿವರ ಕೆಳಕಂಡಂತಿದೆ:**

ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ, ಇತ್ಯಾದಿ ಮೀಸಲಾತಿ ಕುರಿತು ಪ್ರಮಾಣ ಪತ್ರಗಳನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು. ಹಾಗೂ ಈ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರುವ ಪ್ರಮಾಣ ಪತ್ರಗಳು ಆಗಿರಬೇಕು.

10.1. ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕ ಪಟ್ಟಿ

10.2. ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಡಿ" ರಲ್ಲಿ ಪಡೆದಿರಬೇಕು.

10.3. ಪರಿಶಿಷ್ಠ ಪಂಗಡಕ್ಕೆ ಸೇರಿದ ನಿಗದಿಪಡಿಸಿರುವ ಬುಡಕಟ್ಟು ಜನಾಂಗದ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು ಹಾಗೂ ವಾಸಸ್ಥಳದ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು.

**11. ಗಮನಿಸಬೇಕಾದ ಮುಖ್ಯ ಅಂಶಗಳು:**

11.1. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

11.2. ಅಭ್ಯರ್ಥಿಗಳು ಅರ್ಜಿ ಹಾಕುವ ಮೊದಲು ದೇಹದಾರ್ಢ್ಯತೆಯ ಕುರಿತು ಸದರಿ ಹುದ್ದೆಗೆ ನಿಗದಿಪಡಿಸಿರುವ ಮಾನದಂಡವು ತಮಗೆ ಇರುವ ಕುರಿತು ಖಚಿತಪಡಿಸಿಕೊಂಡು ಅರ್ಜಿಯನ್ನು ಸಲ್ಲಿಸಲು ತಿಳಿಸಿದೆ.

11.3. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ On-line ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ಮತ್ತು ಶುಲ್ಕ ಪಾವತಿಸಿದ ರಶೀದಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

11.4. ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು On-line ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು On-line ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

11.5. ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡಿರುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಮೂಲ ದಾಖಲೆಗಳ ಪರಿಶೀಲನೆ ಮತ್ತು ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ಲಿಖಿತ ಪರೀಕ್ಷೆಯನ್ನು ಬರೆಯಲು ಅರ್ಹರೇ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡು ಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ಜಾರಿ ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿದ ವಯೋಮಿತಿ, ವಿದ್ಯಾರ್ಹತೆ,

ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

11.6. ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ.

11.7. ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಕೊನೆಯ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

11.8. ಪ್ರಸ್ತುತ ಸರ್ಕಾರಿ (ಕೇಂದ್ರ ಸರ್ಕಾರ/ಕರ್ನಾಟಕ ರಾಜ್ಯ ಸರ್ಕಾರ/ಇತರೆ ರಾಜ್ಯಗಳು) ಹಾಗೂ ಸಂಸ್ಥೆಗಳಲ್ಲಿ ಅಥವಾ ಪ್ರಾಧಿಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡು ಅರಣ್ಯ ಇಲಾಖೆಯು ಅಪೇಕ್ಷಿಸಿದಾಗ ನೀಡತಕ್ಕದ್ದು.

11.9. ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

11.10. ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

11.11. ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

11.12. ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

11.13. ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.14. ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.15. ಅಭ್ಯರ್ಥಿಯು ನೇಮಕಾತಿ ಪರೀಕ್ಷೆಗೆ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳುಹಿಸಿದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

11.16. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಲ್–04–ಪಿಇಟಿ–2005 ದಿನಾಂಕ 31-3-2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

11.17. ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

11.18. ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ

ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳನ್ನು ಇಲಾಖಾ ವೆಬ್‌ಸೈಟ್: www.aranya.gov.in ನಲ್ಲಿ ಪ್ರಕಟಿಸಲಾಗುವುದು.

11.19. ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ಅಧಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

11.20. ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಲಿಖಿತ ಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗಸೂಚನೆಗಳನ್ನು ನೀಡುತ್ತಾರೆ.

11.21. ನೇರ ನೇಮಕಾತಿ ಪ್ರಕ್ರಿಯೆಯ ಯಾವುದೇ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

11.22. ಅಭ್ಯರ್ಥಿಯ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ಸ್ಪಷ್ಟೀಕರಣಕ್ಕೆ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ. ಎಲ್ಲಾ ಕಾನೂನು ವಿವಾದಗಳು ಕರ್ನಾಟಕ ಆಡಳಿತ ನ್ಯಾಯಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
ಮತ್ತು ಆಯ್ಕೆ ಪ್ರಾಧಿಕಾರ
ಮಂಗಳೂರು ವೃತ್ತ, ಮಂಗಳೂರು

ದಿನಾಂಕ: 14-01-2019
ಮಂಗಳೂರು